MARCH 23, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಮತ ಕ್ಷೇತ್ರಗಳ, ಉಪ ಚುನಾವಣೆಗೆ ನಾಮಪತ್ರ ಸಲ್ಲಿಸಲು ಇಂದು ಕೊನೆ ದಿನವಾಗಿದೆ. ಬಾಗಲಕೋಟೆ ಉಪ ಚುನಾವಣೆ ಹಿನ್ನೆಲೆ, ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿ ಮಠ ಅವರಿಗೆ ಬಿ–ಫಾರಂ ನೀಡಲಾಗಿದ್ದು, ಇಂದು ಪಕ್ಷದ ರಾಜ್ಯಾಧ್ಯಕ್ಷ ಬಿ. ವೈ ವಿಜಯೇಂದ್ರ ಅವರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದರು. ದಾವಣಗೆರೆ ದಕ್ಷಿಣ ಮತ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಸಮರ್ಥ ಶಾಮನೂರು ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ, ಇನ್ನು ಕೆಲವೇ ಕ್ಷಣಗಳಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ. ಎರಡೂ ಕ್ಷೇತ್ರಗಳಿಗೆ ಏಪ್ರಿಲ್ 9 ರಂದು ಮತದಾನ ನಡೆಯಲಿದೆ. ನಾಮಪತ್ರಗಳ ಪರಿಶೀಲನೆ ನಾಳೆ, 24 ರಂದು ನಡೆಯಲಿದೆ. ನಾಮಪತ್ರ ಹಿಂಪಡೆಯಲು, 26 ನೇ ತಾರೀಖು ಕೊನೆ ದಿನವಾಗಿದೆ.

<><><>

ಬಾಗಲಕೋಟೆ, ಉಪಚುನಾವಣೆಯ ಹಿನ್ನೆಲೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ, ಕಠಿಣ ವಾಹನ ತಪಾಸಣೆ ಮುಂದುವರಿದಿದೆ. ಇಳಕಲ್ಲ ತಾಲೂಕಿನ ಗುಗ್ಗಲಮರಿ ಚೆಕ್‌ಪೋಸ್ಟ್‌ನಲ್ಲಿ, ಎಸ್.ಎಸ್.ಟಿ ತಂಡದ ಅಧಿಕಾರಿಗಳು, ದಾಖಲೆ ಇಲ್ಲದ 1 ಲಕ್ಷದ 95 ಸಾವಿರ ರೂಪಾಯಿ ಹಣವನ್ನು ಜಪ್ತಿ ಮಾಡಿದ್ದಾರೆ.

<><><>

ಭಾರತ ಸ್ವಾತಂತ್ರ್ಯ ಸಂಗ್ರಾಮದ, ಅಪ್ರತಿಮ ಕ್ರಾಂತಿಕಾರಿಗಳಾದ, ಭಗತಸಿಂಗ್, ಶಿವರಾಮ ರಾಜಗುರು, ಸುಖದೇವ ಥಾಪರ ಅವರ, ಸರ್ವೋಚ್ಚ ತ್ಯಾಗವನ್ನು, ಹುತಾತ್ಮರ ದಿನವಾದ ಇಂದು, ಸ್ಮರಿಸಿ, ಶ್ರದ್ಧಾ ಸುಮನ ಅರ್ಪಿಸಲಾಗುತ್ತಿದೆ.

<><><>

ಬಲಿದಾನ ದಿವಸ್ ಪ್ರಯುಕ್ತ, ಧಾರವಾಡದ ವೀರ ಸಾವರಕರ ಬಳಗ, 'ಕ್ರಾಂತಿ ಚಿರಾಯುವಾಗಲಿ' ಎಂಬ ಧ್ಯೇಯದೊಂದಿಗೆ, ಇಂದು ಸಂಜೆ 6 ಗಂಟೆಗೆ, ಪಂಜಿನ ಮೆರವಣಿಗೆ ಆಯೋಜಿಸಿದೆ, ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ವೀರ ಸಾವರ್ಕರ ಬಳಗದ ಸದಸ್ಯರಾದ, ದರ್ಶನ...

<><><>

ದರ್ಶನ ಧ್ವನಿ– 36 ಸೆಕೆಂದುಗಳು

<><><>

ರಾಜ್ಯಾದ್ಯಂತ ಎಸ್ಎಸ್ಎಲ್‌ಸಿ, ವಾರ್ಷಿಕ ಪರೀಕ್ಷೆಗಳು, ನಿಗದಿತ ವೇಳಾಪಟ್ಟಿಯಂತೆ ನಡೆಯುತ್ತಿವೆ. ಫಲಿತಾಂಶ ಸುಧಾರಿಸುವ ಉದ್ದೇಶದಿಂದ, ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿ– ಎಸ್.ಡಿ.ಎಂ.ಸಿ ಗಳ ಮುತುವರ್ಜಿಯಿಂದಾಗಿ, ಪರೀಕ್ಷೆಗಳ ನಡುವಿನ ರಜಾದಿನಗಳಲ್ಲಿ, ಪುನರಾವರ್ತನೆ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ತಿಳಿಸಿದೆ.

<><><>

ಗುಲಬರ್ಗಾ ವಿಶ್ವವಿದ್ಯಾಲಯದ ಆವರಣದಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆರಂಭಿಸಿರುವ, ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ ಮೂಲಕ, 19 ವಿದ್ಯಾರ್ಥಿಗಳು, ಭಾರತೀಯ ಸೇನೆಯ, ಅಗ್ನಿವೀರ ಗಳಾಗಿ ಆಯ್ಕೆಯಾಗಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ, ಪ್ರಿಯಾಂಕ ಖರ್ಗೆ, ಎಕ್ಸ್ ಮಾಧ್ಯಮದಲ್ಲಿ ಈ ವಿಷಯ ತಿಳಿಸಿದ್ದಾರೆ.

<><><>

ವನ್ಯಜೀವಿ ಸಂರಕ್ಷಣೆ ಹಾಗೂ ವನವಾಸಿಗರ ಜೀವನೋಪಾಯಕ್ಕೆ, ರಾಜ್ಯ ಸರ್ಕಾರ ಅನೇಕ ಯೋಜನೆಗಳನ್ನು ರೂಪಿಸಿದೆ ಎಂದು, ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ, ಆರ್.ವಿ. ದೇಶಪಾಂಡೆ, ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆ, ಜೋಯಿಡಾ ತಾಲೂಕು, ಕುಂಬಾರವಾಡಾದಲ್ಲಿ, ದಾಂಡೇಲಿ ಅಣಶಿ ಹುಲಿ ಸಂರಕ್ಷಣಾ ಪ್ರತಿಷ್ಠಾನ ಆಯೋಜಿಸಿದ್ದ ಕಾರ್ಯಕ್ರಮವನ್ನು, ಉದ್ಘಾಟಿಸಿ, ಫಲಾನುಭವಿಗಳಿಗೆ, ಸಲಕರಣೆಗಳನ್ನು ವಿತರಿಸಿದರು.

<><><>

ಇಂದು ಕನ್ನಡದ ಪ್ರಥಮ ರಾಷ್ಟ್ರಕವಿ, ಮಂಜೇಶ್ವರ ಗೋವಿಂದ ಪೈ ಅವರ ಜನ್ಮದಿನ. ಖ್ಯಾತ ವಿದ್ವಾಂಸ ಹಾಗೂ ಬಹುಭಾ ಾ ಪಂಡಿತರಾಗಿದ್ದ, ಎಂ. ಗೋವಿಂದ ಪೈ ಅವರ ಜನ್ಮ ಜಯಂತಿಯಂದು, ಕನ್ನಡ ಸಾರಸ್ವತ ಲೋಕಕ್ಕೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿರುವ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

ರಾಮನಗರ ಜಿಲ್ಲೆ, ಚನ್ನಪಟ್ಟಣ ಸಮೀಪ, ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಇಂದು ಮುಂಜಾನೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಾಲ್ವರು ಪ್ರಯಾಣಿಕರು ಮೃತಪಟ್ಟಿದ್ದಾರೆ. ಕೇರಳ ಮೂಲದ ಟ್ರಾವೆಲ್ಸ್ ಕಂಪನಿಗೆ ಸೇರಿದ ಖಾಸಗಿ ಬಸ್, ಬೆಂಗಳೂರು ಕಡೆಗೆ ತೆರಳುತ್ತಿದ್ದು, ಪುಟ್ಟಪ್ಪನದೊಡ್ಡಿ ಬಳಿ, ಡಿವೈಡರ್ ಗೆ ಡಿಕ್ಕಿಯಾಗಿದೆ.  ಹಲವು ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿದೆ. ಚನ್ನಪಟ್ಟಣ ಸಂಚಾರಿ ಠಾಣೆ ಪೊಲೀಸರು, ಘಟನಾ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

<><><>

ಮಾಜಿ ಕ್ರಿಕೆಟಿಗ ಹಾಗೂ ಕ್ರೀಡಾ ತರಬೇತುದಾರರಾಗಿದ್ದ, ಸತೀಶ ತಗರಪುರ ಅವರ ಪತ್ನಿ,  ಧಾರವಾಡ ಜಯನಗರ ನಿವಾಸಿ, ಅನ್ನಪೂರ್ಣಾ ಸತೀಶ್ ತಗರಪುರ ನಿಧನರಾದರು. ಅವರಿಗೆ 82 ವರ್ಷ ವಯಸ್ಸಾಗಿತ್ತು.  ಕರ್ನಾಟಕ ವಿಶ್ವವಿದ್ಯಾಲಯ, ಪಬ್ಲಿಕ್ ಶಾಲೆ ಪ್ರಾಂಶುಪಾಲರಾಗಿ ಅವರು ಸೇವೆ ಸಲ್ಲಿಸಿದ್ದರು.

<><><>

ಮಂಡ್ಯದ ಅಥ್ಲೀಟ್ ವಿಜಯಕುಮಾರಿ ಜಿ.ಕೆ ಅವರು, ತಿರುವನಂತಪುರಂ ನಲ್ಲಿ ಜರುಗಿದ, ಏಳನೇ, ಇಂಡಿಯನ್ ಓಪನ್ ಅಥ್ಲೆಟಿಕ್ಸ್ ಕೂಟದ, ಮಹಿಳೆಯರ 400 ಮೀಟರ್ ಓಟದಲ್ಲಿ ಬೆಳ್ಳಿ ಪದಕ ಜಯಿಸಿದ್ದಾರೆ. ಕರ್ನಾಟಕವನ್ನು ಪ್ರತಿನಿಧಿಸಿದ್ದ ವಿಜಯಕುಮಾರಿ 53 ದಶಾಂಶ 55 ಸೆಕೆಂಡುಗಳಲ್ಲಿ ಗುರಿ ತಲುಪಿದರು.  ತಮಿಳುನಾಡಿನ ವಿದ್ಯಾ ರಾಮರಾಜ್ 53 ದಶಾಂಶ 31 ಸೆಕೆಂಡುಗಳಲ್ಲಿ ಗುರಿ ತಲುಪಿ ಚಿನ್ನದ ಸಾಧನೆ ಮಾಡಿದರು. ಒ.ಎನ್.ಜಿ.ಸಿ ತಂಡವನ್ನು ಪ್ರತಿನಿಧಿಸಿದ್ದ ಕರ್ನಾಟಕದ ಪೂವಮ್ಮ ರಾಜು ಕಂಚಿನ ಪದಕ ತಮ್ಮದಾಗಿಸಿಕೊಂಡರು.

<><><>

ರಾಜ್ಯದ ಕರಾವಳಿ ಜಿಲ್ಲೆಗಳಾದ ಉತ್ತರಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಟ, ಪ್ರವಾಸಿ ತಾಣಗಳು ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಬಲ ತುಂಬಿವೆ ಎಂದು ಪ್ರವಾಸೋದ್ಯಮ ಖಾತೆ ಸಚಿವ ಹೆಚ್. ಕೆ. ಪಾಟೀಲ್ ಹೇಳಿದರು. ಹಳಿಯಾಳದಲ್ಲಿ ಲೋಕೋಪಯೋಗಿ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ, 7 ಕೋಟಿ 98 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಸಮಾವೇಶ ಕೇಂದ್ರ ಕಟ್ಟಡ ಉದ್ಘಾಟಿಸಿ ಮಾತನಾಡಿದರು. ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ, ರಾಜ್ಯದ ಇತರೇ ಜಿಲ್ಲೆಗಳಿಗಿಂತ ವಿಪುಲ ಅವಕಾಶಗಳಿದ್ದು, ಹೆಚ್ಚಿನ ಪ್ರಚಾರದ ಅಗತ್ಯವಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>